# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-40776/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 30.9.23

**ಕಛೇರಿ ಆದೇಶ**

ವಿಷಯ : ಕಾರ್ಯಪಾಲಕ ಅಭಿಯಂತರರಿಗೆ ಸ್ಥಳನಿಯುಕ್ತಿಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 315 ಎಂ.ಎನ್.ಯು 2023, ದಿನಾಂಕ: 27-09-2023
2) ಶ್ರೀ ಸಿ. ರಘು, ಕಾ.ಪಾ.ಅ ರವರ ಮನವಿ ದಿನಾಂಕ: 27-09-2023

----------

ಶ್ರೀ ಸಿ. ರಘು, ಕಾರ್ಯಪಾಲಕ ಅಭಿಯಂತರರು, ಪೌರಾಡಳಿತ ಇಲಾಖೆ ಇವರ ಸೇವೆಯನ್ನು ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಎರಡು ವರ್ಷಗಳ ಅವಧಿಗೆ ಎರವಲು ಸೇವೆಯ ಮೇಲೆ ನಿಯೋಜಿಸಿ, ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗಕ್ಕೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿರುವ ಮೇರೆಗೆ, ಸದರಿ ಅಭಿಯಂತರರು ಉಲ್ಲೇಖ-(2)ರಂತೆ ಪಾಲಿಕೆಯಲ್ಲಿ ಮನವಿ ಸಲ್ಲಿಸಿ ಮರು ಸ್ಥಳನಿಯುಕ್ತಿಗೊಳಿಸಲು ಕೋರಿರುವುದನ್ನು ಪರಿಗಣಿಸಿ, ಸದರಿಯವರನ್ನು ಪಾಲಿಕೆಯ ಕಾಮಗಾರಿ ವಿಭಾಗದ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಈ ತಕ್ಷಣದಿಂದ ಜಾರಿಗೆ ಬರುವಂತೆ, ಈ ಕೆಳಕಂಡ ಷರತ್ತಿಗೊಳಪಡಿಸಿ ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗದಲ್ಲಿ ಶ್ರೀ ಧರಣೇಂದ್ರಕುಮಾರ್, ಕಾ.ಪಾ.ಅ ರವರ ಸ್ಥಳದಲ್ಲಿ ಕಾರ್ಯನಿರ್ವಹಿಸಲು ನೇಮಿಸಿ ಆದೇಶಿಸಿದೆ.

**ಷರತ್ತುಗಳು:**

1) ಇವರ ಸೇವೆಯು ತೃಪ್ತಿಕರವಾಗಿಲ್ಲದಿದ್ದರೆ ಮುನ್ಸೂಚನೆ ಇಲ್ಲದೆ ಇವರನ್ನು ಬಿಡುಗಡೆಗೊಳಿಸುವ ಹಕ್ಕನ್ನು ಬಿ.ಬಿ.ಎಂ.ಪಿ.ಯು ಕಾಯ್ದಿರಿಸಿಕೊಂಡಿರುವ ಷರತ್ತಿಗೊಳಪಡಿಸಿದೆ.
2) ಸದರಿ ಅಭಿಯಂತರರು ಮುಂದೆ ಪಾಲಿಕೆಯಲ್ಲಿ ತಮ್ಮನ್ನು ವಿಲೀನಗೊಳಿಸುವಂತೆ ನ್ಯಾಯಾಲಯದಲ್ಲಿ ಯಾವುದೇ ದಾವೆ ಹೂಡಬಾರದೆಂಬ ಷರತ್ತಿಗೊಳಪಡಿಸಿದೆ.

ಮೇಲ್ಕಂಡ ಆದೇಶದನ್ವಯ ಸದರಿ ಅಭಿಯಂತರರು ನೇಮಿಸಿರುವ ಸ್ಥಳದಲ್ಲಿ ಕೂಡಲೇ ವರದಿ ಮಾಡಿಕೊಂಡು ಸಿ.ಟಿ.ಸಿ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

30/9
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
30/9/2023 30/9/23

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಗೆ ಕಳುಹಿಸಿದೆ.
: ವಲಯ ಆಯುಕ್ತರು, ದಕ್ಷಿಣ ವಲಯ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಜಂಟಿ ಆಯುಕ್ತರು (ದಕ್ಷಿಣ) ವಲಯ / ಪ್ರಧಾನ ಅಭಿಯಂತರರು, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ
: ಮುಖ್ಯ ಅಭಿಯಂತರರು (ದಕ್ಷಿಣ) ವಲಯ ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ / ಉಪ ನಿಯಂತ್ರಕರು (ಹಣಕಾಸು-ದಕ್ಷಿಣ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

ಉಪ ಮುಖ್ಯ ಮಾಹಿತಿ ಅಧಿಕಾರಿ
(ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 701
ದಿನಾಂಕ: 3/10/23